ನಿಯಮ ಬಾಹಿರವಾಗಿ ಶಾಲಾ ಕಾಲೇಜು ಹಾಸ್ಟೆಲ್‌ಗಳನ್ನು ಖಾಸಗಿಯವರಿಗೆ ಗುತ್ತಿಗೆ ನೀಡಿರುವುದು

402 - ಶ್ರೀ ಎಸ್.ಹೆಚ್. ಪುಟ್ಟರಂಗನಾಥ್ (ಬೇಲೂರು) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಸನದ ಶಾಲಾ ಕಾಲೇಜು ಹಾಸ್ಟೆಲ್‌ಗಳನ್ನು ಖಾಸಗಿಯವವರಿಗೆ ನಿಯಮಬಾಹಿರವಾಗಿ ಗುತ್ತಿಗೆ ಆಧಾರದ ಮೇಲೆ ನಿರ್ವಹಣೆಗೆ ನೀಡಿ ಗುತ್ತಿಗೆದಾರರಿಗೆ ಪ್ರತಿ ತಿಂಗಳು ಮಾಮೂಲಿ ವಸೂಲಿ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಹಾಸನ ನಗರದ ಕಾಲೇಜು ಬಾಲಕರ ವಿದ್ಯಾರ್ಥಿ ನಿಲಯದ ನಿರ್ವಹಣೆಯನ್ನು ಕಾಲೇಜು ಪ್ರಾಂಶುಪಾಲರಿಂದ ಕಾಲೇಜು ಶಿಕ್ಷಣ ಇಲಾಖೆಯು ಆದೇಶ ಸಂಖ್ಯೆ. ಕಾಶಿಲಿ 13 ಯೋಜನೆ 97-98ರ ದಿನಾಂಕ 16-8-97ರಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ವಹಿಸಿಕೊಳ್ಳುವಂತೆ ಆದೇಶಿಸಿದೆ. ಆದರೆ, ಈ ನಿಲಯಕ್ಕೆ ಸೇರಿದ ಹುದ್ದೆಗಳನ್ನು ವರ್ಗ ಮಾಡಿರುವುದಿಲ್ಲ. ಕಾರಣ, ಈ ನಿಲಯಕ್ಕೆ ಮಾತ್ರ ಊಟದ ವ್ಯವಸ್ಥೆಯನ್ನು, ಸರ್ಕಾರ ನಿಗಧಿಪಡಿಸಿದ ಮಾಸಿಕ 400-00 ರೂ.ಗಳ ಮಿತಿಯಲ್ಲಿ ಹಾಸನ ಜಿಲ್ಲಾ ಪಂಚಾಯತ್ ಖಾಸಗಿ ಗುತ್ತಿಗೆದಾರರಿಗೆ ಟೆಂಡರ್ ಮೂಲಕ ವಹಿಸಿದೆ. ಗುತ್ತಿಗೆದಾರರಿಂದ ಪ್ರತಿ ತಿಂಗಳು ಮಾಮೂಲಿ ವಸೂಲಿ ಮಾಡಲಾಗುತ್ತಿದೆ ಎಂಬುದು ಸದ್ಯಕ್ಕೆ ದೂರವಾಗಿರುತ್ತದೆ.

ಹಾಸನ ಜಿಲ್ಲೆಯಲ್ಲಿ ವಿದ್ಯಾರ್ಥಿ ನಿಲಯಗಳಲ್ಲಿನ ಸ್ಥಿತಿಗತಿ

403 - ಶ್ರೀ ಎಸ್.ಹೆಚ್. ಪುಟ್ಟರಂಗನಾಥ್ (ಬೇಲೂರು) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಸನ ಜಿಲ್ಲೆಯಲ್ಲಿ ವಿದ್ಯಾರ್ಥಿನಿಲಯಗಳಲ್ಲಿನ ಸ್ಥಿತಿಗತಿಗಳನ್ನು ಸುಧಾರಿಸಲು ಸರ್ಕಾರದಿಂದ ಕ್ರಮ ಕೈಗೊಳ್ಳಲಾಗಿದೆಯೇ, ಹಾಗಿದ್ದಲ್ಲಿ ಕೈಗೊಂಡ ಕ್ರಮಗಳೇನು?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ವಿದ್ಯಾರ್ಥಿನಿಲಯಗಳಿಗೆ ಅತ್ಯಗತ್ಯವಾಗಿ ಬೇಕಾಗಿರುವ ಮೂಲಭೂತ ಸೌಕರ್ಯಗಳು ಅಂದರೆ ನೀರು, ವಿದ್ಯುಚ್ಛಕ್ತಿ, ಶೌಚಾಲಯ ಮುಂತಾದವುಗಳನ್ನು ಒದಗಿಸಲಾಗಿದೆ. ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ವಿದ್ಯಾರ್ಥನಿಲಯಗಳಿಗೆ ಹಂತ ಹಂತವಾಗಿ ಹಣದ ಲಭ್ಯತೆಯನ್ನಾಧರಿಸಿ ಸ್ವಂತ-ಕಟ್ಟಡಗಳನ್ನು ನಿರ್ಮಿಸಲಾಗುತ್ತದೆ. ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ಊಟ, ತಿಂಡಿ ನೀಡುವುದಲ್ಲದೇ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ಸಮವಸ್ತ್ರ, ಪಠ್ಯಪುಸ್ತಕ, ಲೇಖನ ಸಾಮಗ್ರಿ ಹಾಗೂ ಇತರೆ ಸೌಲಭ್ಯಗಳನ್ನು ನೀಡಲಾಗುತ್ತಿದೆ. ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಇರುವ ಮೇಲ್ವಿಚಾರಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗಿದೆ.